ಕರ್ನಾಟಕ ಗೃಹ ಮಂಡಳಿ ವತಿಯಿಂದ ಭೂ ಸ್ವಾಧೀನ

1391(836); ಶ್ರೀ ಅರವಿಂದ ಲಿಂಬಾವಳಿ

ಅ) ಮಹದೇವಪುರ ವಿಧಾನ ಸಭಾ ಕ್ಷೇತ್ರ, ಚಿಕ್ಕಗುಬ್ಬಿ ಗ್ರಾಮದಲ್ಲಿ ಕರ್ನಾಟಕ ಗೃಹ ಮಂಡಳಿಯವರು ಭೂ–ಸ್ವಾಧೀನಪಡಿಸಿಕೊಳ್ಳಲು ಪ್ರಕಟಣೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಜಮೀನಿನಲ್ಲಿ ದುರ್ಬಲ ವರ್ಗದವರು ಸ್ವಯಂಸೇವಾ ಸಂಸ್ಥೆಗಳು ಹಾಗೂ ಶಿಕ್ಷಣ ಸಂಸ್ಥೆಗಳು ಸುಮಾರು ವರ್ಷದಿಂದ ಸಾರ್ವಜನಿಕರ ಸೇವೆಯಲ್ಲಿ ತೊಡಗಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಈ ಜಮೀನನ್ನು ಭೂಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡಲು ಸರ್ಕಾರ ಕ್ರಮಕೈಗೊಳ್ಳುವುದೇ?

ಶ್ರೀ ಡಾ॥ ಎಂ.ಹೆಚ್. ಅಂಬರೀಷ್ (ವಸತಿ ಸಚಿವರು)

ಅ) ಬಂದಿದೆ

ಆ) ಬಂದಿದೆ

ಇ) ಭೂ–ಸ್ವಾಧೀನ ಕಾಯ್ದೆ, 1894ರ ಕಲಂ 5(ಎ) ರನ್ವಯ ಕ್ರಮ ಕೈಗೊಳ್ಳಬೇಕಾಗುತ್ತದೆ.

ನೌಕರರ ಹಾಗೂ ಅಧಿಕಾರಿಗಳ ವಿವರ

1392(1061); ಶ್ರೀ ಅಶೋಕ್ ಖೇಣಿ (ಬೀದರ್ ದಕ್ಷಿಣ)

1) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಡಿಯಲ್ಲಿ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ನೌಕರರ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)